ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಜಿಲ್ಲಾಧಿಕಾರಿಗಳು ಮತ್ತು ಅವರ ಕರ್ತವ್ಯದ ಕುರಿತು

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ(ನಾಮನಿರ್ದೇಶನ ಹೊಂದಿದವರು) -

1057 (1253) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಜಿಲ್ಲಾಧಿಕಾರಿಗಳ ಕಛೇರಿಗಳ ಸಂಖ್ಯೆ ಎಷ್ಟು; ಪ್ರತಿ ಜಿಲ್ಲಾಧಿಕಾರಿಗಳ ಕಛೇರಿಗೆ ಮಂಜೂರಾತಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಕೊರತೆಯಿರುವ ಹುದ್ದೆಗಳ ಸಂಖ್ಯೆ ಎಷ್ಟು; ಕೊರತೆಯಿರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು; (ಜಿಲ್ಲಾವಾರು, ಹುದ್ದೆವಾರು ವಿವರ ನೀಡುವುದು)

(ಆ) ಜಿಲ್ಲಾಧಿಕಾರಿಯವರಿಗೆ ಅರೆ ನ್ಯಾಯಿಕ ಅಧಿಕಾರವನ್ನು ಪ್ರಸಕ್ತ ಮಾಡುವ ಕಾಯಿದೆಗಳು ಯಾವುವು; (ಕಾಯಿದೆವಾರು ವಿವರ ನೀಡುವುದು)

(ಇ) ಜಿಲ್ಲಾಧಿಕಾರಿಯವರು ಅಧ್ಯಕ್ಷರಾಗಿರುವ ಸದಸ್ಯ ಕಾರ್ಯದರ್ಶಿಯಾಗಿರುವ ಸದಸ್ಯರಾಗಿರುವ ಸಮಿತಿಗಳು ಯಾವುವು; ಜಿಲ್ಲಾಧಿಕಾರಿಗಳು ಯಾವ ಯಾವ ಇಲಾಖೆಗಳ ಯಾವ ಯಾವ ಸಮಿತಿಗಳಿಗೆ ಅಧ್ಯಕ್ಷರಾಗಿರುತ್ತಾರೆ; ಜಿಲ್ಲಾಧಿಕಾರಿಗಳು ವಾರ್ಷಿಕವಾಗಿ ಕನಿಷ್ಠ ಭಾಗವಹಿಸಬೇಕಾದ ಈ ಸಮಿತಿಗಳ ಸಭೆಗಳ ಸಂಖ್ಯೆ ಎಷ್ಟು? (ಅವುಗಳಲ್ಲಿ ಕಾರ್ಯನಿರ್ವಹಿಸಲು ಇರುವ ಮಾರ್ಗಸೂಚಿ ಸುತ್ತೋಲೆಯ ಪ್ರತಿಯನ್ನು ಒದಗಿಸುವುದು)